ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	49(37).
ಸದಸ್ಯರ ಹೆಸರು	:	ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	29-01-2021.
ಉತ್ತರಿಸುವ ಸಚಿವರು	:	ಮಾನ್ಯ ಮೂಲಭೂತ ಸೌಕರ್ಯ, ಹಜ್ ಮತ್ತು ವಕ್ಫ್ ಸಚಿವರು.

ಕ್ರ. ಸಂ.	ಪ್ರಶ್ನೆಗಳು	ಉತ್ತರಗಳು
ಅ.	ಮದರಸಗಳಲ್ಲಿನ ಧಾರ್ಮಿಕ ಶಿಕ್ಷಣವನ್ನು ಎಸ್.ಎಸ್.ಎಲ್.ಸಿ.ಗೆ ತತ್ಸಮಾನ ಎಂದು ಪರಿಗಣಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ; ಇದರಿಂದಾಗಿ ಸಮಾಜದ ಒಂದು ವರ್ಗದ ಜನರನ್ನು ಪ್ರತ್ಯೇಕವೆಂದು ಪರಿಗಣಿಸಿದಂತಾಗಲಿಲ್ಲವೇ; ಅವರನ್ನು ಸಾಮಾನ್ಯ ಶಿಕ್ಷಣದಿಂದ ಮತ್ತು ದೇಶದ ಇತಿಹಾಸ ತಿಳಿದುಕೊಳ್ಳುವುದಕ್ಕೆ ಅಡ್ಡಿ ಉಂಟು ಮಾಡಿದಂತಾಗಲಿಲ್ಲವೇ;	ಇಂತಹ ಯಾವುದೇ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ.
ಆ.	ಮದರಸಗಳಲ್ಲಿನ ಧಾರ್ಮಿಕ ಶಿಕ್ಷಣದಲ್ಲಿ ಯಾವ ಯಾವ ವಿಷಯಗಳ ಕುರಿತು ಭೋಧನೆ ಮಾಡಲಾಗುತ್ತದೆ; ಮದರಸ ಶಿಕ್ಷಣಕ್ಕೆ ಸರ್ಕಾರ ಯಾವ ಯಾವ ರೀತಿಯ ಸೌಲಭ್ಯವನ್ನು ನೀಡುತ್ತದೆ;	ಮದರಸಗಳಲ್ಲಿ ಇಸ್ಲಾಂ ಧರ್ಮದಂತೆ ದಿನನಿತ್ಯ ಹಾಗೂ ವಿವಿಧ ಹಬ್ಬಗಳಲ್ಲಿ ಸಲ್ಲಿಸುವ ಪ್ರಾರ್ಥನೆ ಮತ್ತು ಇಡೀ ಜೀವನದಲ್ಲಿ ದೇವರು ಕುರಾನಿನಲ್ಲಿ ಮತ್ತು ಪೈಗಂಬರ್‌ರವರು ಮಾಡಿದ ಬೋಧನೆಯ ಅನುಸಾರ ವೈಯಕ್ತಿಕ ಹಾಗೂ ಸಾಮಾಜಿಕ ಜೀವನ ನಡೆಸುವ ಬಗ್ಗೆ ಬೋಧನೆ ನೀಡಲಾಗುತ್ತದೆ. ಇದರ ಹೊರತು ರಾಜ್ಯದ ಕನ್ನಡ ಭಾಷೆ, ಕಂಪ್ಯೂಟರ್ ಶಿಕ್ಷಣವನ್ನು ಸಹ ನೀಡುವುದಲ್ಲದೆ ಶಿಕ್ಷಣಾರ್ಥಿಗಳನ್ನು ಸಾರ್ವಜನಿಕ ಶಿಕ್ಷಣದಲ್ಲೂ ಭಾಗವಹಿಸುವಂತೆ ಅವಕಾಶ ಕಲ್ಪಿಸಲಾಗುತ್ತಿದೆ. ಮದರಸಾದ ಆಧುನೀಕರಣಕ್ಕಾಗಿ ಸರ್ಕಾರದಿಂದ ಅನುದಾನ ನೀಡಲಾಗುತ್ತಿದೆ.
ಇ	ಮುಂದಿನ ದಿನಗಳಲ್ಲಿ ಧಾರ್ಮಿಕ ಶಿಕ್ಷಣವನ್ನು ಉನ್ನತ ಶಿಕ್ಷಣ ಹಾಗೂ ಸರ್ಕಾರದ ನೇಮಕಾತಿಗಾಗಿ ನಡೆಸಲಾಗುವ ಪರೀಕ್ಷೆಗಳಲ್ಲೂ ಪರಿಗಣಿಸಿ ಅಳವಡಿಸಿಕೊಳ್ಳುವಂತೆ ಸಮಾಜದ ಒಂದು ವರ್ಗ ಒತ್ತಡ ತಂದರೆ ಸರ್ಕಾರದ ನಿಲುವೇನು;	ಇಂತಹ ಯಾವುದೇ ಬೇಡಿಕೆಗಳು ಸರ್ಕಾರದ ಮುಂದೆ ಇರುವುದಿಲ್ಲ.
ಈ	ಮದರಸಗಳಲ್ಲಿನ ಧಾರ್ಮಿಕ ಶಿಕ್ಷಣವನ್ನು ಎಸ್.ಎಸ್.ಎಲ್.ಸಿ. ಗೆ ತತ್ಸಮಾನ ಎಂದು ಪರಿಗಣಿಸಿದಲ್ಲಿ ಆ ಸಮಾಜ ಪಡೆಯುವ ಶಿಕ್ಷಣವೇ ಶ್ರೇಷ್ಠ ಸಾಮಾನ್ಯ ಶಿಕ್ಷಣಕ್ಕೆ ಬೆಲೆ ಇಲ್ಲ ಎಂದು ಸಮಾಜದ ಇತರ ವರ್ಗ ಭಾವಿಸಿದಲ್ಲಿ ಸರ್ಕಾರದ ನಿಲುವೇನು;	ಉದ್ಭವಿಸುವುದಿಲ್ಲ
ಉ	ಮದರಸಗಳನ್ನು ಸಾಮಾನ್ಯ ಶಿಕ್ಷಣ ನೀಡುವ ಶಾಲೆಗಳಾಗಿ ಪರಿವರ್ತಿಸುವ ಕುರಿತು ಸರ್ಕಾರದ ನಿಲುವೇನು?	ಉದ್ಭವಿಸುವುದಿಲ್ಲ

ಸಂಖ್ಯೆ: **MWD 09 LMQ 2021**

(ಆನಂದ್ ಸಿಂಗ್)
ಮೂಲಭೂತ ಸೌಕರ್ಯ, ಹಜ್ ಮತ್ತು
ವಕ್ಫ್ ಸಚಿವರು